# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸಾಲಿನ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | : | 65(113) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19/12/2022 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

LCQ 14'

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿನ ಗ್ರಾಮೀಣ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅಗತ್ಯ ನುರಿತ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>2021-22ನೇ ಸಾಲಿನ 75 ನೇ ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಅಮೃತ ಆರೋಗ್ಯ ಮೂಲ ಸೌಕರ್ಯ ಉನ್ನತೀಕರಣ ಯೋಜನೆ ಅಡಿಯಲ್ಲಿ ರಾಜ್ಯದಲ್ಲಿನ 750 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತಲಾ ರೂ.20.00 ಲಕ್ಷಗಳ ಅನುದಾನದಲ್ಲಿ ದುರಸ್ಥಿ ಮತ್ತು ನವೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಕ್ರಿಯಾ ಯೋಜನೆಗೆ ಆದೇಶ ಸಂಖ್ಯೆ: ಆಕುಕ 232 ಸಿಜಿಎಂ 2021, ದಿ:23.12.2021 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. |
| ಆ. | ಹಾಗಿದ್ದಲ್ಲಿ, ಗ್ರಾಮೀಣ ಮಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಮತ್ತು ಅಗತ್ಯ ನುರಿತ ಸಿಬ್ಬಂದಿಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಅದರಂತೆ, ಜಿಲ್ಲಾ ಉಸ್ತುವಾರಿ ಸಚಿವರುಗಳ ಶಿಫಾರಸ್ಸಿನನ್ವಯ ವಿಜಯಪುರ, ಬಾಗಲಕೋಟ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಯಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ದುರಸ್ಥಿ, ನವೀಕರಣ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾಮಗಾರಿಗಳನ್ನು ತಲಾ ರೂ.20.00 ಲಕ್ಷಗಳ ಮೊತ್ತದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಳಿಕೆ ಮೂಲ ವೃಂದದಲ್ಲಿ ಖಾಲಿಯಿದ್ದ ಅರೆ ವೈದ್ಯಕೀಯ ಹುದ್ದೆಗಳಾದ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿ ಹಾಗೂ ಕಿರಿಯ ವೈದ್ಯಕೀಯ ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾರಿ (ಕ್ಷ-ಕಿರಣ ತಂತ್ರಜ್ಞರು) ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಅಧಿಸೂಚನೆಯನ್ನು ಹೊರಡಿಸಿ, ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಸ್ಥಳನೇಮಕಾತಿ ಮಾಡುವ ಸಮಯದಲ್ಲಿ ಆದ್ಯತೆಯ ಮೇಲೆ ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ನಿಯಮಾನುಸಾರ ನೇಮಕಾತಿ ಮಾಡಲಾಗುವುದು. |
| ಇ. | ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಹಲವು ಗ್ರಾಮೀಣ ಪ್ರಾಥಮಿಕ ಆರೋಗ್ಯ ಉಪ ಕೇಂದ್ರಗಳು ವರ್ಷಾನುಗಟ್ಟಲೆ ಮುಚ್ಚಿರಲು | ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮುಚ್ಚಿರುವುದಿಲ್ಲ. ಆದರೆ, ಬೆಳಗಾವಿ ಜಿಲ್ಲೆಯಲ್ಲಿನ ಒಟ್ಟು 616 ಉಪಕೇಂದ್ರಗಳ ಪೈಕಿ 365 ಉಪಕೇಂದ್ರಗಳಿಗೆ ಕಟ್ಟಡವಿದ್ದು, 152 ಉಪಕೇಂದ್ರಗಳು ಶಿಥಿಲಾವಸ್ಥೆಯಲ್ಲಿರುತ್ತವೆ ಹಾಗೂ 251 ಉಪಕೇಂದ್ರಗಳಿಗೆ ಕಟ್ಟಡ ಲಭ್ಯವಿಲ್ಲದಿದ್ದರೂ ಸಹ ಬಾಡಿಗೆ ಕಟ್ಟಡದಲ್ಲಿ |

| | | |
|---|---|---|
| | ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕಾರ್ಯನಿರ್ವಹಿಸುತ್ತಿವೆ.<br>ವಿಜಯಪುರ ಜಿಲ್ಲೆಯ ಕೆಲವೊಂದು ಉಪಕೇಂದ್ರಗಳನ್ನು ಜಿಲ್ಲಾ ಪಂಚಾಯತ ಅನುದಾನದಿಂದ ದುರಸ್ಥಿಗೊಳಿಸಿ ಕಾರ್ಯಗತಗೊಳಿಸಲಾಗಿದೆ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿನ ಹಲವು ಗ್ರಾಮೀಣ ಪ್ರಾಥಮಿಕ ಆರೋಗ್ಯ ಉಪ ಕೇಂದ್ರಗಳು ದುರಸ್ತಿ ಹಂತದಲ್ಲಿದ್ದು ಯಾವುದೇ ಉಪಕೇಂದ್ರಗಳು ಮುಚ್ಚಿರುವುದಿಲ್ಲ. |
| ಈ. | ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ನೂರಾರು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಶಿಥಿಲಗೊಂಡಿದ್ದರೂ, ಅವುಗಳ ದುರಸ್ಥಿ ಮತ್ತು ಮರು ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳದಿರಲು ಕಾರಣಗಳೇನು; | ವಿಜಯಪುರ, ಬಾಗಲಕೋಟ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪ್ರತಿ ಜಿಲ್ಲೆಯಲ್ಲಿ 25 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ದುರಸ್ಥಿ, ನವೀಕರಣ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾಮಗಾರಿಗಳನ್ನು ತಲಾ ರೂ.20.00 ಲಕ್ಷಗಳ ಮೊತ್ತದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.<br><br>ಇತರೆ ಪ್ರಾಥಮಿಕ ಆರೋಗ್ಯ ಕೇಂದ್ರಗಳ ದುರಸ್ಥಿ ಮತ್ತು ನವೀಕರಣಕ್ಕೆ ಕೋರಿಕೆ ಸ್ವೀಕೃತವಾದಲ್ಲಿ ಅನುದಾನದ ಲಭ್ಯತೆ ಅನುಗುಣವಾಗಿ ಕ್ರಮವಹಿಸಲಾಗುವುದು. |
| ಉ. | ಸದರಿ ಜಿಲ್ಲೆಗಳ ಶಿಥಿಲಗೊಂಡ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಖಾಲಿ ಇರುವ ಒಟ್ಟು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಕೇಂದ್ರಗಳನ್ನು ದುರಸ್ಥಿ ಮಾಡಲು ಮತ್ತು ಸಿಬ್ಬಂದಿ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? (ಹುದ್ದೆವಾರು ಮಾಹಿತಿ ನೀಡುವುದು) | ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಯಾವುದೇ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಶಿಥಿಲಗೊಂಡಿರುವುದಿಲ್ಲ. ಆದರೆ, ಬೆಳಗಾವಿ ಜಿಲ್ಲೆಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಒಟ್ಟು 13 ಹುದ್ದೆಗಳು ಭರ್ತಿಯಾಗಿದ್ದು, 4 ಹುದ್ದೆಗಳು ಖಾಲಿಯಿರುತ್ತವೆ.<br><br>ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಈ ಕೆಳಕಂಡ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. ಸ್ಥಳ ನಿಯುಕ್ತಿಗೊಳಿಸುವ ಸಮಯದಲ್ಲಿ ಆದ್ಯತೆಯ ಮೇಲೆ ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಿಬ್ಬಂದಿಗಳನ್ನು ನೇಮಕ ಮಾಡಲಾಗುವುದು.<br><br>1. ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ– 150 ಹುದ್ದೆಗಳು<br>2. ಫಾರ್ಮಸಿ ಅಧಿಕಾರಿ – 400 ಹುದ್ದೆಗಳು<br>3. ಕಿರಿಯ ವೈದ್ಯಕೀಯ ವಿಕಿರಣ ಶಾಸ್ತ್ರ ಚಿತ್ರಣ ಅಧಿಕಾರಿ (ಕ್ಷ-ಕಿರಣ ತಂತ್ರಜ್ಞರು)– 08 ಹುದ್ದೆಗಳು |

ಆಕುಕ 441 ಸಿಜಿಎಂ 2022

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು